1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

**ಸಿಸಿ.ಸಂಃ67/2022**

ಪಿರ್ಯಾದಿ : ಕವಲಂದೆ ಪೊಲೀಸರು

ವಿರುದ್ಧ

ಆರೋಪಿತರುಃ
1 ರೇವಣ್ಣ ಬಿನ್ ಲೇಟ್ ಲಿಂಗಣ್ಣ 55 ವರ್ಷ
2 ಪರಶಿವಮೂರ್ತಿ ಬಿನ್ ಲೇಟ್ ಲಿಂಗಣ್ಣ 60 ವರ್ಷ
3 ದಯಾನಂದ ಬಿನ್ ಪರಶಿವಮೂರ್ತಿ 26 ವರ್ಷ
4 ಮಹೇಶ ಬಿನ್ ಬಿನ್ ಲೇಟ್ ಲಿಂಗಣ್ಣ 47 ವರ್ಷ
5 ದೇವೀರಮ್ಮ ಕೋಂ ರೇವಣ್ಣ 45 ವರ್ಷ
6 ದಿವ್ಯಶ್ರೀ ಬಿನ್ ಮಹೇಶ 18 ವರ್ಷ

ಎಲ್ಲರ ವಾಸಃ ಬದನವಾಳು ಗ್ರಾಮ, ನಂಜನಗೂಡು ತಾ.

**ದೋಷಾರೋಪಣೆ**

ಶ್ರೀಮತಿ.ಸರಿತಾ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., *1* ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ**:-**

ದಿನಾಂಕಃ 24.07.2020 ರಂದು ಸಂಜೆ 06.00 ಗಂಟೆ ಸಮಯದಲ್ಲಿ ಕವಲಂದೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಬದನವಾಳು ಗ್ರಾಮದಲ್ಲಿ ಆರೋಪಿತರ ಮನೆಯ ಮುಂಭಾಗ ಚಾಸಾ.1 ರವರು ತಮ್ಮ ದನಗಳನ್ನು ಹಿಡಿದುಕೊಂಡು ತಮ್ಮ ಮನೆಗೆ ಹೋಗುತ್ತಿರುವಾಗ, ಆರೋಪಿತರು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆ ಪೈಕಿ 1 ರಿಂದ 3 ನೇ ಆರೋಪಿತರಾದ ನೀವು ಚಾಸಾ.1 ರವರನ್ನು ಉದ್ದೇಶಿಸಿ ನಮ್ಮ ಮನೆಯ ಮುಂದಿನ ಜಾಗ ನಮಗೆ ಸೇರಬೇಕು, ನೀವು ಈ ಜಾಗದಲ್ಲಿ ತಿರುಗಾಡುವಂತಿಲ್ಲ ಎಂದು ಚಾಸಾ.1 ಮತ್ತು 2 ರವರನ್ನು ಅಡ್ಡಹಾಕಿ ಹೋಗದಂತೆ ತಡೆದು ಅಕ್ರಮ ತಡೆಯನ್ನುಂಟು ಮಾಡಿದ ಕಾರಣ ಭಾರತ ದಂಡ

ಸಂಹಿತೆಯ ಕಲಂ 341 ಸಹವಾಚಕ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೇಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆ ಪೈಕಿ 1 ರಿಂದ 3 ನೇ ಆರೋಪಿತರಾದ ನೀವು ಚಾಸಾ.1 ಮತ್ತು 2 ರವರ ಮೈಕೈಗೆ ಹೊಡೆದಿರುತ್ತೀರಿ, ಕೆಳಗೆ ಬಿದ್ದ ಚಾಸಾ.1 ರವರಿಗೆ 2 ನೇ ಆರೋಪಿಯು ಕಾಲಿನಿಂದ ತುಳಿದಿರುತ್ತೀರಿ ಮತ್ತು 4 ಮತ್ತು 5 ನೇ ಆರೋಪಿತರಾದ ನೀವು ಚಾಸಾ.1 ರವರ ಜುಟ್ಟನ್ನು ಹಿಡಿದು ಎಳೆದಾಡಿ ಚಾಸಾ.1 ರವರ ಬಲಗಾಲಿಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.323 ಸಹವಾಚಕ ಕಲಂ.34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಮೂರನೇಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆ ಪೈಕಿ 1 ಮತ್ತು 3 ನೇ ಆರೋಪಿತರಾದ ನೀವು ಚಾಸಾ.1 ರವರ ಸೀರೆಯನ್ನು ಹಿಡಿದು ಎಳೆದಾಡಿ ಆಕೆಯ ಮೇಲೆ ಹಲ್ಲೆ ಮಾಡಿ ಮಾನಭಂಗ ಮಾಡಲು ಪ್ರಯತ್ನಿಸಿ ಅವರ ಮೇಲೆ ಅಪರಾಧಿಕ ಬಲಪ್ರಯೋಗ ಮಾಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ.354 ಸಹವಾಚಕ ಕಲಂ.34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ನಾಲ್ಕನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆ ಪೈಕಿ 6 ನೇ ಆರೋಪಿತರಾದ ನೀವು ಚಾಸಾ.1 ಮತ್ತು 2 ರವರಿಗೆ ಕಾರದಪುಡಿಯನ್ನು ಎರಚಿ ಸಾಮಾನ್ಯ ಸ್ವರೂಪದ ನೋವುಂಟುಮಾಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.324 ಸಹವಾಚಕ ಕಲಂ.34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಕೊನೇಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆರೋಪಿತರಾದ ನೀವು ಚಾಸಾ.1 ಮತ್ತು 2 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಶಾಂತಿ ಭಂಗ ಮಾಡಲಿ ಅಥವಾ ಇತರೆ ಯಾವುದೇ ಅಪರಾಧ ಮಾಡಲಿ ಎನ್ನುವ ಉದ್ದೇಶದಿಂದ ಅವರನ್ನು ಅವಮಾನಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.504 ಸಹವಾಚಕ ಕಲಂ.34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

(ಮೇಲ್ಕಂಡ ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 21.07.2025 ರಂದು ತೆರೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು

**ಸಿಸಿ.ಸಂಃ67/2022**

ಪಿರ್ಯಾದಿ ಃ ಕವಲಂದೆ ಪೊಲೀಸರು

ವಿರುದ್ಧ

ಆರೋಪಿತರುಃ 1 ರೇವಣ್ಣ ಬಿನ್ ಲೇಟ್ ಲಿಂಗಣ್ಣ 55 ವರ್ಷ

2 ಪರಶಿವಮೂರ್ತಿ ಬಿನ್ ಲೇಟ್ ಲಿಂಗಣ್ಣ 60 ವರ್ಷ

3 ದಯಾನಂದ ಬಿನ್ ಪರಶಿವಮೂರ್ತಿ 26 ವರ್ಷ

4 ಮಹೇಶ ಬಿನ್ ಬಿನ್ ಲೇಟ್ ಲಿಂಗಣ್ಣ 47 ವರ್ಷ

5 ದೇವೀರಮ್ಮ ಕೋಂ ರೇವಣ್ಣ 45 ವರ್ಷ

6 ದಿವ್ಯಶ್ರೀ ಬಿನ್ ಮಹೇಶ 18 ವರ್ಷ

ಎಲ್ಲರ ವಾಸಃ ಬದನವಾಳು ಗ್ರಾಮ, ನಂಜನಗೂಡು ತಾ.

ಃ ಆಪಾದನೆ ಃ

ಪ್ರಶ್ನೆಃ1– ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ಆಪಾದನೆಯನ್ನು ಅರ್ಥಮಾಡಿಕೊಂಡಿರುವಿರಾ?

1 ನೇ ಆರೋಪಿ ಉತ್ತರಃ

2 ನೇ ಆರೋಪಿ ಉತ್ತರಃ

3 ನೇ ಆರೋಪಿ ಉತ್ತರಃ

4 ನೇ ಆರೋಪಿ ಉತ್ತರಃ

5 ನೇ ಆರೋಪಿ ಉತ್ತರಃ

6 ನೇ ಆರೋಪಿ ಉತ್ತರಃ

ಪ್ರಶ್ನೆಃ2– ಸದರಿ ಆಪಾದನೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ನೇ ಆರೋಪಿ ಉತ್ತರಃ

2 ನೇ ಆರೋಪಿ ಉತ್ತರಃ

3 ನೇ ಆರೋಪಿ ಉತ್ತರಃ

4 ನೇ ಆರೋಪಿ ಉತ್ತರಃ

5 ನೇ ಆರೋಪಿ ಉತ್ತರಃ

6 ನೇ ಆರೋಪಿ ಉತ್ತರಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
**ನಂಜನಗೂಡು**